KA/E-GPO/2515/WPP-47 /2000-2011

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ಪತ್ರಿಕೆ

| ಭಾಗ–IV-A | ಬೆಂಗಳೂರು, ಶನಿವಾರ, ಏಪ್ರಿಲ್ ೨೮, ೨೦೧೨ (ವೈಶಾಖ ೮, ಶಕ ವರ್ಷ ೧೯೩೪) | ನಂ.೩೦೫ |
|---|---|---|

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 29 ಶಾಸನ 2011, ಬೆಂಗಳೂರು, ದಿನಾಂಕ: 28.04.2012.

ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2011 – ಇದಕ್ಕೆ 2012ರ ಏಪ್ರಿಲ್ ತಿಂಗಳ 26ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2012ರ ಕರ್ನಾಟಕ ಅಧಿನಿಯಮ ಸಂಖ್ಯೆ:21 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2012ರ ಕರ್ನಾಟಕ ಅಧಿನಿಯಮ ಸಂಖ್ಯೆ:21

(2012ರ ಏಪ್ರಿಲ್ 28ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2011

(2012ರ ಏಪ್ರಿಲ್ 28ನೇ ದಿನಾಂಕದಂದು ಕರ್ನಾಟಕ ರಾಜ್ಯಪಾಲರ ಅನುಮತಿಯನ್ನು ಪಡೆದಿದೆ)

ಸಹ್ಯಾದ್ರಿ ಪರಂಪರೆ ಅಭಿವೃದ್ಧಿಗಾಗಿ ಪ್ರಾಧಿಕಾರವೊಂದರ ಸ್ಥಾಪನೆಗೆ ಮತ್ತು ಅದರ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕೆ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಸಹ್ಯಾದ್ರಿ ಪರಂಪರೆ ಅಭಿವೃದ್ಧಿಗಾಗಿ ಪ್ರಾಧಿಕಾರವೊಂದರ ಸ್ಥಾಪನೆಗೆ ಮತ್ತು ಅದರ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕೆ ಉಪಬಂಧ ಕಲ್ಪಿಸಲು ಯುಕ್ತವಾಗಿರುವುದರಿಂದ;

ಭಾರತ ಗಣರಾಜ್ಯದ ಅರವತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಅಧಿನಿಯಮಿತವಾಗಲಿ:-

### ಅಧ್ಯಾಯ – I

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ:- (1) ಈ ಅಧಿನಿಯಮವನ್ನು ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2011 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. ಪರಿಭಾಷೆ:- ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,

(ಎ) "ಪ್ರಾಧಿಕಾರ" ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿಸಲಾದ ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ:

(ಬಿ) "ಸಹ್ಯಾದ್ರಿ ಪರಂಪರೆ ಪ್ರದೇಶ" ಎಂದರೆ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳನ್ನು ಒಳಗೊಂಡ ಪ್ರದೇಶಗಳು;

(ಸಿ) "ಅಧ್ಯಕ್ಷ" ಎಂದರೆ, ಪ್ರಾಧಿಕಾರದ ಅಧ್ಯಕ್ಷ;

(ಡಿ) "ಇಲಾಖೆ" ಎಂದರೆ, ಯಾವುದೇ ಅಧಿನಿಯಮದ ಮೂಲಕ ಅಥವಾ ಅದರಡಿಯಲ್ಲಿ ರಾಜ್ಯ ಸರ್ಕಾರದಿಂದ ಸ್ಥಾಪಿತವಾದ ಯಾವುದೇ ನಿಗಮ ಅಥವಾ ನಿಕಾಯ ಅಥವಾ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವು ಪಡೆಯುತ್ತಿರುವ ಯಾವುದೇ ಸಂಸ್ಥೆ ಅಥವಾ ನಿಕಾಯವೂ ಸೇರಿದಂತೆ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ;

(ಇ) "ಸದಸ್ಯ" ಎಂದರೆ, ಪ್ರಾಧಿಕಾರದ ಸದಸ್ಯ ;

(ಎಫ್) " ಯೋಜನೆಗಳು ಮತ್ತು ಕಾರ್ಯಕ್ರಮಗಳು" ಎಂದರೆ, ಸಹ್ಯಾದ್ರಿ ಪರಂಪರೆ ಅಭಿವೃದ್ಧಿಗಾಗಿ ಪ್ರಾಧಿಕಾರವು ನಿಗದಿಪಡಿಸಿದ ವಾರ್ಷಿಕ ಯೋಜನೆಗಳು ಮತ್ತು ಕಾರ್ಯಕ್ರಮಗಳು;

(ಜಿ) "ಕಾರ್ಯದರ್ಶಿ" ಎಂದರೆ, ಪ್ರಾಧಿಕಾರದ ಕಾರ್ಯದರ್ಶಿ;

(ಹೆಚ್) "ನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ನಿಯಮಗಳು;

## ಅಧ್ಯಾಯ – II

3. ಪ್ರಾಧಿಕಾರದ ರಚನೆ:- (1) ಈ ಅಧಿನಿಯಮವು ಪ್ರಾರಂಭವಾದ ತರುವಾಯ ಸಾಧ್ಯವಾದಷ್ಟು ಬೇಗನೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಸಹ್ಯಾದ್ರಿ ಪರಂಪರೆ ಅಭಿವೃದ್ಧಿಗಾಗಿ ಶಿವಮೊಗ್ಗದಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಮಾಡಿರುವ ಮತ್ತು 4ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಷ್ಟು ಸಂಖ್ಯೆಯ ಸದಸ್ಯರನ್ನು ಒಳಗೊಂಡಿರುವ "ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ" ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಕರಾರು ಮಾಡಿಕೊಳ್ಳಲು ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಮೇಲೆ ಹೆಸರಿನ ಒಂದು ನಿಗಮಿತ ನಿಕಾಯವಾಗಿ ಇರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ಒಳಗಾಗತಕ್ಕದ್ದು.

4. ಪ್ರಾಧಿಕಾರದ ಅಧ್ಯಕ್ಷರು ಮತ್ತು ಸದಸ್ಯರು:- ಪ್ರಾಧಿಕಾರವು, ಸನ್ಮಾನ್ಯ ಮುಖ್ಯ ಮಂತ್ರಿಗಳನ್ನು ಅದರ ಅಧ್ಯಕ್ಷರನ್ನಾಗಿ ಮತ್ತು ಈ ಮುಂದೆ ನಿರ್ದಿಷ್ಟಪಡಿಸಿದ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

ಸಹ್ಯಾದ್ರಿ ಪರಂಪರೆ ಪ್ರದೇಶಕ್ಕೆ ಸಂಬಂಧಿಸಿದಂತೆ:-

| | |
|---|---|
| 1) ಜಿಲ್ಲಾ ಉಸ್ತುವಾರಿ ಸಚಿವರು | ಉಪಾಧ್ಯಕ್ಷರು |
| 2) ಜಿಲ್ಲಾಧಿಕಾರಿ | ಪದನಿಮಿತ್ತ ಸದಸ್ಯರು |
| 3) ಜಿಲ್ಲಾ ಪಂಚಾಯತಿ ಅಧ್ಯಕ್ಷರು | ಸದಸ್ಯರು |
| 4) ಅರಣ್ಯ ಸಂರಕ್ಷಣಾಧಿಕಾರಿ | ಪದನಿಮಿತ್ತ ಸದಸ್ಯರು |
| 5) ಪೊಲೀಸ್ ಅಧೀಕ್ಷಕರು | ಪದನಿಮಿತ್ತ ಸದಸ್ಯರು |

II ಇತರ ಸದಸ್ಯರು,-

| | | |
|---|---|---|
| (ಎಫ್) | ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ | ಪದನಿಮಿತ್ತ ಸದಸ್ಯರು |
| (ಜಿ) | ಒಬ್ಬ ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ | ಸದಸ್ಯರು |
| (ಎಚ್) | ಪುರಾತತ್ವ ಅಧೀಕ್ಷಕರು ಭಾರತದ ಪುರಾತತ್ವ ಸರ್ವೇಕ್ಷಣಾ ಇಲಾಖೆ ಬೆಂಗಳೂರು ಮತ್ತು ಧಾರವಾಡ ವಿಭಾಗ | ಸದಸ್ಯರು |
| (ಐ) | ಆಯುಕ್ತರು, ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯಗಳು ಹಾಗೂ ಪರಂಪರೆ ಇಲಾಖೆ | ಸದಸ್ಯರು |
| (ಜೆ) | ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು | ಸದಸ್ಯರು |
| (ಕೆ) | ಕುಲಪತಿ, ಕುವೆಂಪು ಮತ್ತು ಧಾರವಾಡ ವಿಶ್ವವಿದ್ಯಾಲಯ | ಸದಸ್ಯರು |
| (ಎಲ್) | ಮುಖ್ಯ ಅಭಿಯಂತರರು, ಶರಾವತಿ ಯೋಜನೆ ಮತ್ತು ಭದ್ರಾ ಜಲಾಶಯ ಯೋಜನೆ, ಕವಿನಿನಿ | ಸದಸ್ಯರು |
| (ಎಂ) | ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ | ಸದಸ್ಯರು |
| (ಎನ್) | ರಾಜ್ಯ ಸರ್ಕಾರವು ನಾಮನಿರ್ದೇಶನ ಮಾಡಿದ ಆರು ಜನ ಐತಿಹಾಸಿಕ ಮತ್ತು ಸಾಂಸ್ಕೃತಿಕ ಕ್ಷೇತ್ರದ ತಜ್ಞರು | ಸದಸ್ಯರು |
| (ಓ) | ಪ್ರಾಧಿಕಾರದ ಕಾರ್ಯದರ್ಶಿ | ಸದಸ್ಯ ಕಾರ್ಯದರ್ಶಿ |

5. ಪದಾವಧಿ ಮತ್ತು ಸೇವಾ ಷರತ್ತುಗಳು.- (1) ರಾಜ್ಯ ಸರ್ಕಾರದ ಇಚ್ಛೆಗೆ ಒಳಪಟ್ಟು, ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಅಧಿಕಾರೇತರ ಸದಸ್ಯರು ಮೂರು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು. ಇದು ಅಧಿಕಾರಿ ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ.

(2) ಅಧ್ಯಕ್ಷರು ಅಥವಾ ಪದನಿಮಿತ್ತ ಸದಸ್ಯರ ಹೊರತಾಗಿ ಯಾವೊಬ್ಬ ಸದಸ್ಯನು ತನ್ನ ಸಹಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಪತ್ರವನ್ನು ಬರೆದು ತನ್ನ ಸದಸ್ಯತ್ವಕ್ಕೆ ರಾಜೀನಾಮೆ ನೀಡಬಹುದು. ಆದರೆ ಅವನ ರಾಜೀನಾಮೆಯು ಅಂಗೀಕಾರವಾಗುವವರೆಗೆ ಹುದ್ದೆಯಲ್ಲಿ ಮುಂದುವರೆಯತಕ್ಕದ್ದು.

(3) ಯಾವೊಬ್ಬ ಅಧಿಕಾರೇತರ ಸದಸ್ಯನ ಹುದ್ದೆಯಲ್ಲಿಯ ಆಕಸ್ಮಿಕ ಖಾಲಿ ಸ್ಥಾನವನ್ನು, ರಾಜ್ಯ ಸರ್ಕಾರವು ಇನ್ನೊಬ್ಬ ವ್ಯಕ್ತಿಯನ್ನು ಸದಸ್ಯನಾಗಿ ನಾಮನಿರ್ದೇಶನ ಮಾಡುವ ಮೂಲಕ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ನಾಮನಿರ್ದೇಶಿತನಾದ ಸದಸ್ಯನು ತನಗಿಂತ ಮೊದಲಿದ್ದ ವ್ಯಕ್ತಿಯ ಪದಾವಧಿಯು ಪೂರ್ಣವಾಗದೆ ಉಳಿದ ಭಾಗದ ಅವಧಿಗೆ ಅಧಿಕಾರವನ್ನು ಹೊಂದಿರತಕ್ಕದ್ದು.

(4) ಅಧ್ಯಕ್ಷರು ಮತ್ತು ಇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯೆಗಳನ್ನು ಪಡೆಯತಕ್ಕದ್ದು.

(5) ಅಧ್ಯಕ್ಷರು ಮತ್ತು ಇತರ ಸದಸ್ಯರುಗಳಿಗೆ ಸಂದಾಯ ಮಾಡಬೇಕಾದ ಭತ್ಯೆಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

(6) ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ವ್ಯವಹರಣೆಯು ಪ್ರಾಧಿಕಾರದಲ್ಲಿ ಯಾವುದೇ ಖಾಲಿ ಸ್ಥಾನವಿರುವುದರಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣ ಮಾತ್ರದಿಂದಲೇ ಅಸಿಂಧುವಾಗತಕ್ಕದ್ದಲ್ಲ.

6. ಹುದ್ದೆಯ ಸದಸ್ಯತ್ವಕ್ಕೆ ಅನರ್ಹತೆ.- (1) ಒಬ್ಬ ವ್ಯಕ್ತಿಯು, ಅವನು,-

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ದೋಷಸಿದ್ಧಿಯಾಗಿದ್ದು, ಕಾರಾವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥಚಿತ್ತದವನಾಗಿದ್ದು, ಹಾಗೆಂದು ಒಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನ ಅಥವಾ ನಿಯಂತ್ರಣದಲ್ಲಿರುವ ಒಂದು ನಿಕಾಯ ಅಥವಾ ನಿಗಮದ ಸೇವೆಯಿಂದ ತೆಗೆದು ಹಾಕಲಾದವನಾಗಿದ್ದರೆ ಅಥವಾ ವಜಾ ಆದವನಾಗಿದ್ದರೆ; ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾರ್ಯದಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾಗಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವತಃ ಅವನು ಅಥವಾ ಅವನ ಪಾಲುದಾರನು ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ;

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

- ಸದಸ್ಯನಾಗಿ ನೇಮಿತನಾಗುವುದಕ್ಕೆ ಮತ್ತು ಸದಸ್ಯನಾಗುವುದಕ್ಕೆ ಅನರ್ಹನಾಗಿರತಕ್ಕದ್ದು.

(2) ಒಬ್ಬ ವ್ಯಕ್ತಿಯು, ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ಯಾವುದೇ ಜಾಹೀರಾತನ್ನು ಪ್ರಕಟಿಸಲಾಗಿರುವ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ (1)ನೇ ಉಪಪ್ರಕರಣದ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

7. ಸದಸ್ಯನನ್ನು ತೆಗೆದುಹಾಕುವುದು.- (1) ರಾಜ್ಯ ಸರ್ಕಾರವು, ಒಬ್ಬ ಅಧಿಕಾರೇತರ ಸದಸ್ಯನನ್ನು ಅವನು,-

(ಎ) 6ನೇ ಪ್ರಕರಣದಲ್ಲಿ ಹೇಳಲಾದ ಯಾವುವೇ ಅನರ್ಹತೆಗಳಿಗೆ ಒಳಪಟ್ಟರೆ:

ಪರಂತು, ಅಧಿಕಾರೇತರ ಸದಸ್ಯನನ್ನು ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ಅವನು (1)ನೇ ಉಪ-ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ ತೆಗೆದುಹಾಕತಕ್ಕದ್ದಲ್ಲ; ಅಥವಾ

(ಬಿ) ಅವನು ಕಾರ್ಯವನ್ನು ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಸಿ) ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ; ಅಥವಾ

(ಡಿ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ತನ್ನ ಸ್ಥಾನವನ್ನು ಅವನು ದುರುಪಯೋಗಪಡಿಸಿಕೊಂಡಿದ್ದು, ಅವನನ್ನು ಆ ಪದದಲ್ಲಿ ಮುಂದುವರಿಸುವುದರಿಂದ ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವುದೆಂದು ಕಂಡುಬಂದರೆ,

- ಸದಸ್ಯತ್ವದಿಂದ ಅವನನ್ನು ತೆಗೆದುಹಾಕತಕ್ಕದ್ದು:

ಪರಂತು, ಯಾವೊಬ್ಬ ಸದಸ್ಯನನ್ನು ಅವನಿಗೆ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಒಂದು ಅವಕಾಶವನ್ನು ಕೊಟ್ಟ ಹೊರತು, ಈ ಖಂಡದ ಅಡಿಯಲ್ಲಿ ತೆಗೆದುಹಾಕತಕ್ಕದ್ದಲ್ಲ.

8. ಕಾರ್ಯದರ್ಶಿ.- (1) ರಾಜ್ಯ ಸರ್ಕಾರವು, ಗ್ರೂಪ್-ಎ ದರ್ಜೆಗೆ ಕಡಿಮೆಯಿಲ್ಲದ ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಕಾರ್ಯದರ್ಶಿಯಾಗಿ ನೇಮಕ ಮಾಡತಕ್ಕದ್ದು. ಕಾರ್ಯದರ್ಶಿಯು ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(2) ರಾಜ್ಯ ಸರ್ಕಾರವು, ಕಾಲಕಾಲಕ್ಕೆ, ಕಾರ್ಯದರ್ಶಿಯವರಿಗೆ ಗೈರುಹಾಜರಿ ರಜೆಗೆ ಅನುಮತಿ ನೀಡಬಹುದು.

(3) ಕಾರ್ಯದರ್ಶಿಯು ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಯಾಗಿರತಕ್ಕದ್ದು ಮತ್ತು ಅವನು,-

(ಎ) ಪ್ರಾಧಿಕಾರದಿಂದ ಅನುಮೋದಿತವಾದ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರನಾಗಿರತಕ್ಕದ್ದು;

(ಬಿ) ಪ್ರಾಧಿಕಾರದ ನಿಧಿಯನ್ನು ನಿರ್ವಹಿಸತಕ್ಕದ್ದು;

(ಸಿ) ಪ್ರಾಧಿಕಾರದ ಲೆಕ್ಕಪತ್ರಗಳನ್ನು ಇಡುವಂತೆ ಮಾಡತಕ್ಕದ್ದು;

(ಡಿ) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರ ಅಡಿಯಲ್ಲಿ ಅವನಿಗೆ ಪ್ರದಾನ ಮಾಡಲಾಗಿರುವ ಇತರ ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು; ಮತ್ತು

(ಇ) ಅಧ್ಯಕ್ಷರು ತಪಾಸಣೆ ಮಾಡುವ ಸಮಯದಲ್ಲಿ, ಕಚೇರಿಯ ದಾಖಲೆಗಳನ್ನು ಹಾಜರುಪಡಿಸಲು ಜವಾಬ್ದಾರನಾಗಿರತಕ್ಕದ್ದು.

9. ಪ್ರಾಧಿಕಾರದ ಅಧಿಕಾರಿಗಳು ಮತ್ತು ಸೇವಾ ಷರತ್ತುಗಳು.- (1) ವಿಧಿಸಬಹುದಾದ ಅಂಥ ನಿಯಮಗಳಿಗೊಳಪಟ್ಟು, ರಾಜ್ಯ ಸರ್ಕಾರವು ಅಥವಾ ರಾಜ್ಯ ಸರ್ಕಾರವು ಪ್ರಾಧಿಕೃತಗೊಳಿಸಬಹುದಾದಂಥ ಇತರ ಅಧಿಕಾರಿಯು, ಪ್ರಾಧಿಕಾರದ ಪ್ರಕಾರ್ಯಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಅವಶ್ಯವೆಂದು ಭಾವಿಸಬಹುದಾದಂಥ ಇತರ ಅಧಿಕಾರಿಗಳನ್ನು ಮತ್ತು ನೌಕರರನ್ನು ನೇಮಕ ಮಾಡಬಹುದು ಅಥವಾ ಪ್ರತಿನಿಯೋಜಿಸಬಹುದು.

(2) ಮೇಲೆ ನಿರ್ದಿಷ್ಟಪಡಿಸಲಾದ ಅಧಿಕಾರಿಗಳ ಮತ್ತು ನೌಕರರ ನೇಮಕಾತಿ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ವಿಧಿಸಬಹುದಾದಂಥವುಗಳಾಗಿರತಕ್ಕದ್ದು.

10. ಪ್ರಾಧಿಕಾರದ ಸಭೆಗಳು.- (1) ಪ್ರಾಧಿಕಾರದ ಸಭೆಗಳನ್ನು ಅಧ್ಯಕ್ಷರು ಅಥವಾ ಅಧ್ಯಕ್ಷರ ಪೂರ್ವಾನುಮತಿ ಪಡೆದು ಕಾರ್ಯದರ್ಶಿಯು ಕರೆಯತಕ್ಕದ್ದು ಮತ್ತು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಯಾವುದೇ ಸ್ಥಳದಲ್ಲಿ ನಡೆಸತಕ್ಕದ್ದು.

(2) ಪ್ರಾಧಿಕಾರವು ಕಡೇಪಕ್ಷ ಎರಡು ತಿಂಗಳಿಗೊಮ್ಮೆಯಾದರೂ ಸಭೆ ಸೇರತಕ್ಕದ್ದು.

(3) ಅಧ್ಯಕ್ಷರು ಅವಶ್ಯವೆಂದು ಭಾವಿಸಿದರೆ, ಅಧ್ಯಕ್ಷರು ಅಥವಾ ಅಧ್ಯಕ್ಷರ ಪೂರ್ವಾನುಮತಿಯನ್ನು ಪಡೆದು ಕಾರ್ಯದರ್ಶಿಯು ವಿಶೇಷ ಸಭೆಯನ್ನು ಕರೆಯತಕ್ಕದ್ದು.

(4) ಪ್ರಾಧಿಕಾರವು ತನ್ನ ಸಭೆಗಳಲ್ಲಿ ಕಾರ್ಯನಿರ್ವಹಣೆಯ ಸಂಬಂಧದಲ್ಲಿ ವಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬಹುದಾದಂಥ ಕಾರ್ಯವಿಧಾನದ ನಿಯಮಗಳನ್ನು ಅನುಸರಿಸತಕ್ಕದ್ದು.

(5) ಅಧ್ಯಕ್ಷರು ಪ್ರತಿಯೊಂದು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದ ಅಧ್ಯಕ್ಷರಿಗೆ ಯಾವುದೇ ಸಭೆಯಲ್ಲಿ ಭಾಗವಹಿಸಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿದ್ದ ಸದಸ್ಯರ ಪೈಕಿ ಆರಿಸಲ್ಪಟ್ಟ ಯಾವೊಬ್ಬ ಇತರ ಸದಸ್ಯನು ಸಭೆಯ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(6) ಗಣಪೂರ್ತಿ ಆಗಲು ಒಂಬತ್ತು ಜನ ಸದಸ್ಯರಿರತಕ್ಕದ್ದು.

11. ವ್ಯವಹರಣೆಗಳು ಸರಿಯಾಗಿವೆಯೆಂದು ಮತ್ತು ಸಿಂಧುವಾಗಿವೆಯೆಂದು ಪೂರ್ವಭಾವನೆ ಮಾಡುವುದು.- ಅಧ್ಯಕ್ಷರಾಗಿ ಅಥವಾ ಸದಸ್ಯನಾಗಿ ಕಾರ್ಯನಿರ್ವಹಿಸುತ್ತಿರುವ ಯಾವೊಬ್ಬ ವ್ಯಕ್ತಿಯ, ಅನರ್ಹತೆಯ ಅಥವಾ ನೇಮಕಾತಿಯ ನ್ಯೂನತೆಯ ಕಾರಣ ಮಾತ್ರದಿಂದ, ಪ್ರಾಧಿಕಾರದ ಯಾವುದೇ ಕ್ರಮ ಅಥವಾ ವ್ಯವಹರಣೆಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗನುಸಾರವಾಗಿಲ್ಲದ ಹೊರತು, ಅಂಥ ಕ್ರಮ ಅಥವಾ ವ್ಯವಹರಣೆಯು ದೋಷಪೂರಿತವಾಗಿದೆಯೆಂದು ಪೂರ್ವಭಾವನೆ ಮಾಡತಕ್ಕದ್ದಲ್ಲ.

12. ಉಪ ಸಮಿತಿ.- ಪ್ರಾಧಿಕಾರವು ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ ಅದರ ಸದಸ್ಯರ ಪೈಕಿ ಒಂಬತ್ತು ಸಂಖ್ಯೆಗೆ ಜನರನ್ನು ಮೀರದಷ್ಟು ಅಂಥ ಸಂಖ್ಯೆಯ ಸದಸ್ಯರಿರುವ ಒಂದು ಉಪ ಸಮಿತಿಯನ್ನು ರಚಿಸಬಹುದು. ಪ್ರಾಧಿಕಾರದ ಅಧ್ಯಕ್ಷರು ಉಪಸಮಿತಿಯ ಅಧ್ಯಕ್ಷರು ಕೂಡ ಆಗಿರತಕ್ಕದ್ದು.

13. ಉಪಸಮಿತಿಯ ಅಧಿಕಾರಗಳು ಮತ್ತು ಕರ್ತವ್ಯಗಳು.- (1) ಉಪಸಮಿತಿಯು ಪ್ರಾಧಿಕಾರವು ಅದಕ್ಕೆ ಪ್ರತ್ಯಾಯೋಜಿಸಲಾದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(2) ಉಪಸಮಿತಿಯು ಕನಿಷ್ಠ ತಿಂಗಳಿಗೊಂದು ಸಲವಾದರೂ ಸಭೆ ಸೇರತಕ್ಕದ್ದು.

(3) ಉಪಸಮಿತಿಯು, ಪ್ರಾಧಿಕಾರದ ನಿರ್ಧಾರಗಳನ್ನು ತಪ್ಪದೇ ಅನುಷ್ಠಾನಗೊಳಿಸಲಾಗುತ್ತಿದೆಯೇ ಎಂಬುದನ್ನು ಪುನರೀಕ್ಷಿಸತಕ್ಕದ್ದು ಮತ್ತು ತುರ್ತುಸ್ವರೂಪದ ವಿಷಯಗಳ ಬಗ್ಗೆ ನಿರ್ಧಾರ ಕೈಗೊಳ್ಳತಕ್ಕದ್ದು ಹಾಗೂ ರಾಜ್ಯ ಸರ್ಕಾರಕ್ಕೆ ತುರ್ತು ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸಲಹೆ ನೀಡತಕ್ಕದ್ದು.

(4) ಉಪಸಮಿತಿಯು, ತನ್ನ ಸಭೆಗಳಲ್ಲಿ ಕಾರ್ಯನಿರ್ವಹಣೆಯ ಸಂಬಂಧದಲ್ಲಿ, ವಿನಿಯಮಗಳ ಮೂಲಕ ಉಪಬಂಧಿಸಬಹುದಾದಂಥ ಕಾರ್ಯವಿಧಾನದ ನಿಯಮಗಳನ್ನು ಅನುಸರಿಸತಕ್ಕದ್ದು.

14. ತಜ್ಞರ ಸೇವೆಗಳನ್ನು ಪಡೆದುಕೊಳ್ಳುವುದು.- (1) ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ, ಪ್ರಾಧಿಕಾರವು ಅವಶ್ಯವಾದರೆ, ತಾನು ಸೂಕ್ತವೆಂದು ಭಾವಿಸಬಹುದಾದಂಥ ವಿಧಾನದಲ್ಲಿ ತಜ್ಞರ ಸೇವೆಗಳನ್ನು ಅಥವಾ ನೆರವನ್ನು ಪಡೆದುಕೊಳ್ಳಬಹುದು.

(2) ಅಂಥ ತಜ್ಞರು ಸಲ್ಲಿಸಿದ ಸೇವೆ ಅಥವಾ ನೆರವಿನ ಬಗ್ಗೆ ಸಂದಾಯಮಾಡತಕ್ಕ ಗೌರವಧನ ಮತ್ತು ಭತ್ಯೆಗಳು, ನಿಯಮಿಸಬಹುದಾದಂಥ ಮೊಬಲಗಾಗಿರತಕ್ಕದ್ದು.

## ಅಧ್ಯಾಯ - III

## ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು

15. ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.- ಪ್ರಾಧಿಕಾರವು, ಪ್ರತಿವರ್ಷವೂ, ಸಹ್ಯಾದ್ರಿ ಪರಂಪರೆ ಅಭಿವೃದ್ಧಿಗಾಗಿ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸತಕ್ಕದ್ದು ಮತ್ತು ಅವನ್ನು ರಾಜ್ಯ ಸರ್ಕಾರಕ್ಕೆ ಅನುಮೋದನೆಗಾಗಿ ಕಳುಹಿಸತಕ್ಕದ್ದು, ರಾಜ್ಯ ಸರ್ಕಾರವು ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು, ಮಾರ್ಪಾಟನ್ನು ಮಾಡಿ ಅಥವಾ ಮಾರ್ಪಾಟಿಲ್ಲದೆ ಅನುಮೋದಿಸಬಹುದು.

16. [illegible] ಈ ಮುಂದಿನ [illegible] ಎಂದರೆ:-

(1) ಸಹ್ಯಾದ್ರಿ [illegible] ಐತಿಹಾಸಿಕ, ಪಾರಂಪರಿಕ ಮತ್ತು ಪಾರಿಸರಿಕ ಪರಂಪರೆ ಮತ್ತು ಮೌಲ್ಯಗಳನ್ನು ರಕ್ಷಿಸಿ ಬೆಳೆಸುವುದು;

(2) ಸಾಂಸ್ಕೃತಿಕ ಚಟುವಟಿಕೆಗಳನ್ನು ಸಹ್ಯಾದ್ರಿ ಪರಂಪರೆ ಪ್ರದೇಶದಲ್ಲಿ ಹಮ್ಮಿಕೊಂಡು, ಸಾಂಸ್ಕೃತಿಕ ಅವಶ್ಯಕತೆಗಳನ್ನು ಪೂರೈಸುವುದು;

(3) ಸಹ್ಯಾದ್ರಿ ಪರಂಪರೆ ಪ್ರದೇಶದಲ್ಲಿ ಉತ್ಸವಗಳನ್ನು ಹಮ್ಮಿಕೊಳ್ಳುವುದು, ಪರಂಪರೆಯನ್ನು ಬಿಂಬಿಸುವ ವಸ್ತು ಸಂಗ್ರಹಾಲಯಗಳನ್ನು ಕಟ್ಟುವ, ಸಹ್ಯಾದ್ರಿ ಪರಂಪರೆ ಬಗ್ಗೆ ಸಂಪೂರ್ಣ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು;

(4) ಇದಕ್ಕೆ ಪೂರಕವಾದ ಇತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು; ಮತ್ತು

(5) ನಿಯಮಿಸಬಹುದಾದ ಅಂಥ ಇತರ ಪ್ರಕಾರ್ಯಗಳನ್ನು ನೆರವೇರಿಸುವುದು.

17. ಮಾಹಿತಿ ಪಡೆದುಕೊಳ್ಳುವುದು.- ಪ್ರಾಧಿಕಾರವು, ಈ ಅಧಿನಿಯಮದ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರದ ಯಾವುದೇ ಅಧಿಕಾರಿಯಿಂದಲಾದರೂ ಸಹ್ಯಾದ್ರಿ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಕೋರಬಹುದು ಮತ್ತು ಪಡೆದುಕೊಳ್ಳಬಹುದು ಹಾಗೂ ಅಂಥ ಅಧಿಕಾರಿಯು ಪ್ರಾಧಿಕಾರವು ಕೋರಬಹುದಾದ ಮಾಹಿತಿಯನ್ನು ಒದಗಿಸಲು ಬದ್ಧನಾಗಿರತಕ್ಕದ್ದು.

18. ಪ್ರಾಧಿಕಾರದ ಸಲಹೆಗಳು.- ಪ್ರಾಧಿಕಾರವು, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ತನ್ನ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಬಗ್ಗೆ ರಾಜ್ಯ ಸರ್ಕಾರಕ್ಕೆ ಸಲಹೆಗಳನ್ನು ನೀಡತಕ್ಕದ್ದು.

19. ಕರ್ತವ್ಯ ಲೋಪಗಳನ್ನು ಪರಿಶೀಲಿಸುವ ಮತ್ತು ನೇಮಕಾತಿ ಪ್ರಾಧಿಕಾರಕ್ಕೆ ತಿಳಿಸುವ ಅಧಿಕಾರ.- ಪ್ರಾಧಿಕಾರವು, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ, ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಅಥವಾ ಈಗಾಗಲೇ ಜಾರಿಯಲ್ಲಿರುವ ಯಾವುದೇ ಆದೇಶವನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ, ಅಂಥ ಉಲ್ಲಂಘನೆಯನ್ನು ಕರ್ತವ್ಯ ಲೋಪವೆಂದು ಪರಿಗಣಿಸತಕ್ಕದ್ದು ಮತ್ತು ಅಂಥ ವ್ಯಕ್ತಿಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆಗಳನ್ನು ನೀಡತಕ್ಕದ್ದು.

## ಅಧ್ಯಾಯ - IV

20. ಪ್ರಾಧಿಕಾರದ ನಿಧಿ.- (1) ಪ್ರಾಧಿಕಾರದ ನಿಧಿಯೆಂದು ಕರೆಯಲಾಗುವ ಒಂದು ನಿಧಿಯನ್ನು ಹೊಂದಿರತಕ್ಕದ್ದು.

(2) ಈ ಮುಂದಿನವುಗಳು ಪ್ರಾಧಿಕಾರದ ನಿಧಿಯ ಒಂದು ಭಾಗವಾಗಿರತಕ್ಕದ್ದು ಅಥವಾ ಪ್ರಾಧಿಕಾರದ ನಿಧಿಗೆ ಸಂದಾಯವಾಗತಕ್ಕದ್ದು, ಎಂದರೆ:-

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ, ನಿಗಮಿತವಾಗಿರುವ ಅಥವಾ ನಿಗಮಿತವಾಗಿರದ ಯಾವುದೇ ನಿಕಾಯ ಅಥವಾ ಯಾರೇ ವ್ಯಕ್ತಿಗಳು ಮಾಡುವ ಎಲ್ಲ ಅನುದಾನಗಳು, ಧನಸಹಾಯಗಳು, ದಾನಗಳು ಮತ್ತು ಕೊಡುಗೆಗಳು; ಮತ್ತು

(ii) ಯಾವುದೇ ರೀತಿಯ ಯಾವುದೇ ಮೂಲದಿಂದ ಪ್ರಾಧಿಕಾರದಿಂದ ಅಥವಾ ಅದರ ಪರವಾಗಿ ಸ್ವೀಕರಿಸಲಾದ ಎಲ್ಲ ಇತರ ಮೊತ್ತಗಳು.

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮಾ ಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಹೂಡತಕ್ಕದ್ದು.

(4) ಪ್ರಾಧಿಕಾರದ ಕಾರ್ಯದರ್ಶಿ, ಮತ್ತು ಅದರ ಅಧಿಕಾರಿಗಳು ಮತ್ತು ನೌಕರರಿಗೆ ಸಂದಾಯವಾಗತಕ್ಕ ವೇತನಗಳು, ಭತ್ಯೆಗಳು ಮತ್ತು ನಿವೃತ್ತಿ ವೇತನಗಳೂ ಸೇರಿದಂತೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

21. ರಾಜ್ಯ ಸರ್ಕಾರದಿಂದ ಅನುದಾನ.- ರಾಜ್ಯ ಸರ್ಕಾರವು, ಪ್ರತಿ ವರ್ಷವು ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊಬಲಗನ್ನು ಪ್ರಾಧಿಕಾರಕ್ಕೆ ಅನುದಾನವಾಗಿ ನೀಡತಕ್ಕದ್ದು.

22. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.- (1) ಪ್ರಾಧಿಕಾರದ ನಿಧಿಯ ಆದಾಯ ಮತ್ತು ವೆಚ್ಚದ ಲೆಕ್ಕಪತ್ರಗಳನ್ನು ನಿಯಮಿಸಬಹುದಾದಂಥ ನಿಯಮಗಳಿಗೆ ಅನುಸಾರವಾಗಿ ಇಡತಕ್ಕದ್ದು.

(2) ಪ್ರಾಧಿಕಾರವು, ಗೊತ್ತುಪಡಿಸಬಹುದಾದ ಅಂಥ ನಮೂನೆಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ತಯಾರಿಸತಕ್ಕದ್ದು.

(3) ರಾಜ್ಯ ಸರ್ಕಾರವು ನೇಮಕ ಮಾಡಬಹುದಾದಂಥ ಲೆಕ್ಕಪರಿಶೋಧಕರಿಂದ ಪ್ರಾಧಿಕಾರದ ಲೆಕ್ಕಪತ್ರಗಳ ವಾರ್ಷಿಕ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(4) ಲೆಕ್ಕಪರಿಶೋಧಕರು ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅಧಿಕಾರ ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕಪರಿಶೋಧನೆಗಾಗಿ ನಿಯಮಿಸಬಹುದಾದ ಅಂಥ ವೆಚ್ಚಗಳನ್ನು ತನ್ನ ನಿಧಿಯಿಂದ ಸಂದಾಯ ಮಾಡತಕ್ಕದ್ದು.

(6) ಲೆಕ್ಕಪರಿಶೋಧಕರ ವರದಿಯನ್ನು, ಸ್ವೀಕರಿಸಿದ ತರುವಾಯ ಸಾಧ್ಯವಾದಷ್ಟು ಬೇಗ, ಪ್ರಾಧಿಕಾರವು ಲೆಕ್ಕಪರಿಶೋಧಕರ ವರದಿ ಒದು ಪ್ರತಿಯೊಂದಿಗೆ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯ ಪ್ರತಿಯೊಂದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದು ನಿಯಮಿಸಬಹುದಾದಂಥ ರೀತಿಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ಪ್ರಕಟಿಸುವಂತೆ ಮಾಡತಕ್ಕದ್ದು.

(7) ರಾಜ್ಯ ಸರ್ಕಾರವು, ಲೆಕ್ಕಪರಿಶೋಧಕರ ವರದಿಯನ್ನು ಪರಿಶೀಲಿಸಿದ ತರುವಾಯ ತಾನು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

## ಅಧ್ಯಾಯ – V

23.ವರದಿ:- ಪ್ರಾಧಿಕಾರವು, ನಿಯಮಿಸಬಹುದಾದಂಥ ದಿನಾಂಕಗಳಿಗೆ ಮೊದಲು, ಅಂಥ ನಮೂನೆಯಲ್ಲಿ ನಿಯಮಗಳಲ್ಲಿ ನಿಯಮಿಸಲಾದ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

24, ಪ್ರಾಧಿಕಾರದ ಆಯವ್ಯಯ:- ಪ್ರಾಧಿಕಾರದ ಪ್ರತಿವರ್ಷ, ಮುಂದಿನ ಏಪ್ರಿಲ್ ಮೊದಲನೇ ದಿನಾಂಕದಿಂದಾಗುವ ಹಣಕಾಸು ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಅಂದಾಜನ್ನು, ನಿಯಮಿಸಬಹುದಾದಂಥ ದಿನಾಂಕದಂದು ಅಂಥ ನಮೂನೆಯಲ್ಲಿ, ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

25. ನಿಯಮಗಳ ರಚನಾಧಿಕಾರ:- (1)ರಾಜ್ಯ ಸರ್ಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು, ಪೂರ್ವ ಪ್ರಕಟಣೆಯ ತರುವಾಯ, ಅಧಿಸೂಚನೆಯ ಮೂಲಕ, ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಮೇರೆಗೆ ರಚಿಸಲಾದ ಪ್ರತಿಯೊಂದು ನಿಯಮವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗ, ರಾಜ್ಯ ವಿಧಾನಮಂಡಲವು ಅಧಿವೇಶನದಲ್ಲಿದ್ದರೆ, ಅದರ ಪ್ರತಿಯೊಂದು ಸದನದ ಮುಂದೆ ಒಂದು ಅಥವಾ ಎರಡು ಹೆಚ್ಚು ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿದ್ದಾಗ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಿದ ಅಧಿವೇಶನ ಅಥವಾ ಅದರ ನಿಕಟ ತರುವಾಯದ ಅಧಿವೇಶನ ಮುಕ್ತಾಯವಾಗುವ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಒಪ್ಪಿದರೆ ಅಥವಾ ಯಾವುದೇ ನಿಯಮ ರಚಿಸಬಾರದೆಂದು ನಿರ್ಧರಿಸಿದರೆ ನಿಯಮವು ಹಾಗೆ ಮಾರ್ಪಾಟಿತ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಆ ತರುವಾಯ ಸಂದರ್ಭಾನುಸಾರ, ನಿಯಮವು ಹಾಗೆ ಮಾರ್ಪಾಟಿತ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಯಾವುದೇ ಪರಿಣಾಮ ಹೊಂದಿರತಕ್ಕದ್ದಲ್ಲ ಆದರೆ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯು ಆ ನಿಯಮದ ಮೇರೆಗೆ ಮೊದಲು ಮಾಡಿದ ಯಾವುದೇ ಕೃತ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

26. ವಿನಿಯಮಗಳನ್ನು ರಚಿಸಲು ಪ್ರಾಧಿಕಾರದ ಅಧಿಕಾರ:- ಪ್ರಾಧಿಕಾರವು ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 25ನೇ ಪ್ರಕರಣದ ಅಡಿಯಲ್ಲಿ ರಚಿಸಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಕೆ.ಬೋರೇಗೌಡ

ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ